1	2	3	4
16	ಧಾರ್ಮಿಕ ಸ್ಥಳಗಳಲ್ಲಿ ಮೂಲಭೂತ ಸೌಕರ್ಯ ಮತ್ತು ವಸತಿ ಸೌಕರ್ಯ	1400.99	1400.99
17	ಮಾನಸ ಸರೋವರ ಯಾತ್ರಿಕರಿಗೆ ನೆರವು	500.00	500.00
18	ಮಿನಿ ವಿಧಾನ ಸೌಧ ಮತ್ತು ಉಪ ನೋಂದಣಾಧಿಕಾರಿಗಳ ಕಛೇರಿ ಕಟ್ಟಡ ನಿರ್ಮಾಣ	3000.00	2446.20
19	ಜಿಲ್ಲಾ ಕಛೇರಿಗಳ ಸಂಕೀರ್ಣ ಕಟ್ಟಡ ನಿರ್ಮಾಣ	3000.00	2446.00
20	ಬಸವಕಲ್ಯಾಣ ಅಭಿವೃದ್ಧಿ ಮಂಡಳಿ	500.00	228.15
21	ಕಾಗಿನೆಲೆ ಅಭಿವೃದ್ಧಿ ಮಂಡಳಿ	500.00	484.50
22	ಕಿತ್ತೂರು ಅಭಿವೃದ್ಧಿ ಪ್ರಾಧಿಕಾರ	80.00	60.00
23	ಕೂಡಲ ಸಂಗಮ ಅಭಿವೃದ್ಧಿ ಮಂಡಳಿ	137.49	137.49

ಗಂಗಾ ಮತಸ್ಥ ಜನಾಂಗದವರಿಗೆ ಹೆಚ್ಚಿನ ಸೌಲಭ್ಯಗಳನ್ನು ಒದಗಿಸುವುದು

2 (67) **ಶ್ರೀ ಬಾಲಕೃಷ್ಣ ಸಿ.ಎನ್.** (ಶ್ರವಣಬೆಳಗೊಳ):– ಮಾನ್ಯ ಯುವ ಸಬಲೀಕರಣ ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ದಯವಿಟ್ಟು ಈ ಪ್ರಶ್ನೆಗಳಿಗೆ ಉತ್ತರಿಸುವರೇ:–

(ಅ) ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಗಂಗಾಮತಸ್ಥ ಜನಾಂಗದವರು ವಾಸವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ತಾಲ್ಲೂಕಿನಲ್ಲಿರುವ ಈ ಜನಾಂಗದವರ ಜನಸಂಖ್ಯೆ ಎಷ್ಟು ; (ಗ್ರಾಮಗಳವಾರು ವಿವರಗಳನ್ನು ನೀಡುವುದು)

(ಇ) ಹಾಗಿದ್ದಲ್ಲಿ, ಈ ಜನಾಂಗದವರ ಜನಸಂಖ್ಯೆಗನುಗುಣವಾಗಿ ಮೂಲಭೂತ ಸೌಲಭ್ಯ ಹಾಗೂ ಸರ್ಕಾರದ ಇತರೆ ಸೌಲಭ್ಯಗಳನ್ನು ಒದಗಿಸಲಾಗಿದೆಯೇ ;

(ಈ) ಹಾಗಿದ್ದಲ್ಲಿ, ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗಿದೆ; (ವಿವರಗಳನ್ನು ನೀಡುವುದು)

(ಉ) ಮೀನುಗಾರಿಕೆ ಇಲಾಖೆಯಿಂದ ಈ ಜನಾಂಗದವರಿಗೆ ಹೆಚ್ಚಿನ ಸಂಖ್ಯೆಯಲ್ಲಿ ವಸತಿ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಶ್ರೀ ಕೆ. ಅಭಯ ಚಂದ್ರ (ಮಾನ್ಯ ಯುವ ಸಬಲೀಕರಣ ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು):–

(ಅ) ಹೌದು.

(ಆ) ಮೀನುಗಾರಿಕೆ ಇಲಾಖೆಯು ಮೀನುಗಾರರ ಜಾತಿವಾರು ಜನಗಣತಿ ಕೈಗೊಂಡಿರುವುದಿಲ್ಲ.

(ಇ) ಗಂಗಾಮತಸ್ಥ ಜನಾಂಗದವರನ್ನೊಳಗೊಂಡಂತೆ ಎಲ್ಲಾ ವೃತ್ತಿಪರ ಮೀನುಗಾರರಿಗೆ ಮೀನುಗಾರಿಕೆ ಇಲಾಖೆಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

(ಈ) ಕೆರೆಗಳ ಗುತ್ತಿಗೆ ಮತ್ಸ್ಯಾಶ್ರಯ ಯೋಜನೆಯಡಿ ಮನೆ, ಮಿನುಗಾರಿಕೆ ಸಲಕರಣೆ ಕಿಟ್, ಕೊಳಗಳ ನಿರ್ಮಾಣಕ್ಕಾಗಿ ಎನ್.ಎಂ.ಪಿ.ಎಸ್. ಯೋಜನೆಯಡಿ ಸಹಾಯಧನ, ಉಚಿತವಾಗಿ ಶಾಖಿನಿರೋಧಕ ಪೆಟ್ಟಿಗೆ, ಸೈಕಲ್ ಮತ್ತು ಐಸ್‌ಬಾಕ್ಸ್, ಬಾವಿಗಳಿಗೆ ಉಚಿತ ಮೀನುಮತಿ ವಿತರಣೆ, ಉಚಿತವಾಗಿ ಫೈಬರ್‌ಗ್ಲಾಸ್ ಹರಿಗೋಲು ವಿತರಣೆ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

(ಉ) ಮೀನುಗಾರಿಕೆ ಇಲಾಖೆಯ ಮತ್ಸ್ಯಾಶ್ರಯ ಯೋಜನೆಯಲ್ಲಿ ಗಂಗಾಮತಸ್ಥ ಜನಾಂಗದವರಿಗೆ ಹೆಚ್ಚಿನ ಸಂಖ್ಯೆಯಲ್ಲಿ ಸೌಲಭ್ಯ ಕಲ್ಪಿಸಲು ಅನುವಾಗುವಂತೆ ಆಯ್ಕೆ ಪ್ರಕ್ರಿಯೆಯಲ್ಲಿ ಹುಟ್ಟಿನಿಂದ/ವೃತ್ತಿಯಲ್ಲಿ ಮೀನುಗಾರಿಕೆ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿರಬೇಕು ಎಂಬ ಷರತ್ತನ್ನು ವಿಧಿಸಲಾಗಿದೆ. ಮೀನುಗಾರಿಕೆ ಚಟುವಟಿಕೆಗಳಲ್ಲಿ ತೊಡಗಿರುವ ಮೀನುಗಾರರಿಗೆ ಮೀನುಗಾರಿಕೆ ಇಲಾಖೆಯಿಂದ ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಕಳೆದ 3 ವರ್ಷಗಳಿಂದ ಇದುವರೆವಿಗೂ ಒಟ್ಟು 32 ಮನೆಗಳನ್ನು ಮಂಜೂರು ಮಾಡಲಾಗಿದೆ.

ಕ್ರೀಡಾಂಗಣ ನಿರ್ಮಿಸುವುದು

3 (68) **ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ)**:– ಮಾನ್ಯ ಯುವ ಸಬಲೀಕರಣ ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ದಯವಿಟ್ಟು ಈ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಚನ್ನರಾಯಪಟ್ಟಣಕ್ಕೆ ಕ್ರೀಡಾಂಗಣ ಮಂಜೂರು ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕ್ರೀಡಾಂಗಣದ ನಿರ್ಮಾಣಕ್ಕೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆಯೇ ;

(ಇ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದ ಅನುದಾನವನ್ನು ಬಿಡುಗಡೆ ಮಾಡಲಾಗಿದೆ;

(ಈ) ಕ್ರೀಡಾಂಗಣದ ನಿರ್ಮಾಣಕ್ಕೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಿದ್ದರೂ ಸಹ ಅನುದಾನವನ್ನು ಬಿಡುಗಡೆ ಮಾಡದೇ ಇರಲು ಕಾರಣಗಳೇನು ;

(ಉ) ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ?

ಶ್ರೀ ಕೆ. ಅಭಯ ಚಂದ್ರ (ಮಾನ್ಯ ಯುವ ಸಬಲೀಕರಣ ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು):–

(ಅ) ಬಂದಿದೆ.

(ಆ) ಸರ್ಕಾರಿ ಆದೇಶ ಸಂ: ವಾಪ್ರಯು/120/98 ದಿ: 15–06–1998 ರಲ್ಲಿ ರೂ. 36.50 ಲಕ್ಷಗಳ ಅನುದಾನದಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಾಣ ಕಾಮಗಾರಿಯನ್ನು ಮಾಡಲು ಆಡಳಿತಾತ್ಮಕ